| | | | |
|---|---|---|---|
| ಕರ್ನಾಟಕ ಸರ್ಕಾರ | | | (ಸಿ.ಆರ್.ಪಿ-67) |
| ಹೇಳಿಕೆ ಹಾಳೆ (ಆರ್.ಸಿ. ಸಂಖ್ಯೆ 57) ನಮೂನೆ ಸಂಖ್ಯೆ 4 | ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ಚನ್ನಪಟ್ಟಣ | | |
| | ಸಿ.ಸಿ ನಂ. 4641/2022 | | |
| | | ಸಿ.ಡಬ್ಲೂ | 4 |
| | | ಪಿ.ಡಬ್ಲೂ | 4 |
| ಸಾಕ್ಷಿದಾರರ ಹೆಸರು | ಶಿವಕುಮಾರ್ ಬಿನ್ ವೆಂಕಟೇಗೌಡ | | |
| ವಯಸ್ಸು | 49 ವರ್ಷ | | |
| ಉದ್ಯೋಗ | ಚಾಲಕ | | |
| ವಾಸಸ್ಥಳ | ಚನ್ನಪಟ್ಟಣ | | |

**ದಿನಾಂಕ 22.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

**1)** ಚಾಸಾ-**1** ನಮ್ಮ ಗ್ರಾಮದವರು. ಚಾಸಾ-**2** ಮತ್ತು **3** ರವರು ನನ್ನ ಸ್ನೇಹಿತರು. ಆರೋಪಿತನ ಪರಿಚಯ ಇಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿಯು ನಿಪಿ.**3** ಅಮಾನತ್ತು ಪಂಚನಾಮೆ ಮತ್ತು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ **3**(ಸಿ) ಎಂದು ಗುರುತಿಸಲಾಯಿತು. ನಿಪಿ.**3** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ನಿಪಿ.**3** ಕ್ಕೆ ಪೊಲೀಸರ ಕೋರಿಕೆಯ ಮೇರೆಗೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ.

**ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿದ್ದು, ಕೋರಿಕೆಯ ಮೇರೆಗೆ ಅನುಮತಿ ನೀಡಲಾಗಿದೆ.**

**ಪಾಟೀ ಸವಾಲುಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

1) ದಿಃ**07.08.2022** ರಂದು ಚನ್ನಪಟ್ಟಣ ಸಂಚಾರಿ ಪೊಲೀಸ್ ಠಾಣೆಯ ಮುಂಭಾಗಕ್ಕೆ ನನ್ನನ್ನು ಕರೆಸಿ ಸ್ಥಳದಲ್ಲಿ ಕೆಎ**55**ಇಸಿ**0983** ಮತ್ತು ಕೆಎ**50**ಇ**8746** ನೇದ್ದರ ಎರಡು ದ್ವಿಚಕ್ರ ವಾಹನಗಳನ್ನು ನನ್ನ ಹಾಗೂ ಚಾಸಾ-**1** ಮತ್ತು **2** ರವರ ಸಮಕ್ಷಮ ಜಪ್ತುಪಡಿಸಿ ನಿಪಿ.**3** ರಂತೆ ಪಂಚನಾಮೆ ಮಾಡಿ ಅಲ್ಲೇ ನನ್ನ ಸಹಿ ಪಡೆದರು ಎಂದರೆ ಸರಿಯಲ್ಲ. ಆರೋಪಿತ ಪರಿಚಯ ಇರುವ ಕಾರಣ ಆತನ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ- ಇಲ್ಲ.**

**<u>ವಾಟೀ ಸವಾಲುಃ</u> ಆರೋಪಿ ಪರ ವಕೀಲರು ವಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.**

**(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು**)**

ಓ.ಹೆ.ಕೆ.ಸರಿ ಇದೆ.

ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳು
ಚನ್ನಪಟ್ಟಣ.